### ನೇಮಕಾತಿ ವೇಳೆ ಕೆನೆಪದರ ತತ್ವ ಪಾಲಿಸಲು ಆಗ್ರಹ

# ಹುದ್ದೆ ಆಧರಿತ ಮೀಸಲಾತಿ ತೀರ್ಪು ಕಾಯ್ದಿರಿಸಿದ 'ಸುಪ್ರೀಂ'

ಪ್ರಜಾವಾಣಿ ವಾರ್ತೆ


"ಬ್ಯಾಕ್‌ಲಾಗ್" ಹುದ್ದೆಗಳ ನೇಮಕಾತಿ ವೇಳೆ ಮೀಸಲಾತಿಯನ್ನಷ್ಟೇ ಮಾನದಂಡ ಆಗಿ ಪರಿಗಣಿಸುವುದರಿಂದ ಇತರ ವರ್ಗದವರಿಗೆ ಅವಕಾಶ ಸಿಗುವುದಿಲ್ಲ

**ರಾಜೀವ್ ಧವನ್**
'ಅಹಿಂಸಾ' ಪರ ವಕೀಲರು


ಈ ಅರ್ಜಿಗೆ ಕಾನೂನಿನ ಮಾನ್ಯತೆಯೇ ಇಲ್ಲ. ಪ್ರಕರಣಕ್ಕೆ ಸಂಬಂಧಿಸಿದಂತೆ ಅರ್ಜಿದಾರರು ಮತ್ತೊಮ್ಮೆ ತೀರ್ಪು ಬರಬೇಕು ಎಂದು ನಿರೀಕ್ಷಿಸಿದಂತಿದೆ

**ಇಂದಿರಾ ಜೈಸಿಂಗ್**
ಎಸ್‌ಸಿ/ಎಸ್‌ಟಿ ನೌಕರರ ಪರ ವಕೀಲರು

ನವದೆಹಲಿ: ಹುದ್ದೆ ಆಧರಿತ ಮೀಸಲಾತಿ ವ್ಯವಸ್ಥೆ ಜಾರಿಯಾಗಬೇಕು. ನೇಮಕಾತಿಯ ಆರಂಭಿಕ ಹಂತದಲ್ಲೇ ಕೆನೆಪದರದ ತತ್ವ ಪಾಲಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಲಾದ ಮೇಲ್ಮನವಿಯ ವಿಚಾರಣೆಯನ್ನು ಪೂರ್ಣಗೊಳಿಸಿರುವ ಸುಪ್ರೀಂ ಕೋರ್ಟ್ ಈ ಕುರಿತ ತೀರ್ಪನ್ನು ಕಾಯ್ದಿರಿಸಿತು.

'ಮೀಸಲಾತಿ ಆಧಾರದಲ್ಲಿ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮ ಜ್ಯೇಷ್ಠತೆ ವಿಸ್ತರಿಸುವ' ರಾಜ್ಯ ಸರ್ಕಾರದ ನೂತನ ಕಾಯ್ದೆಯನ್ನು ವಿರೋಧಿಸಿ ಮೇಲ್ಮನವಿ ಸಲ್ಲಿಸಿದ್ದ ಬಿ.ಕೆ. ಪವಿತ್ರ ಮತ್ತಿತರರನ್ನು ಒಳಗೊಂಡಿರುವ ಅಲ್ಪಸಂಖ್ಯಾತ, ಹಿಂದುಳಿದ ಮತ್ತು ಸಾಮಾನ್ಯ ವರ್ಗದ (ಅಹಿಂಸಾ) ನೌಕರರೇ ಕಳೆದ ಜುಲೈ 26ರಂದು ಈ ಮೇಲ್ಮನವಿ ಸಲ್ಲಿಸಿದ್ದರು.

ನೂತನ ಕಾಯ್ದೆ ಎತ್ತಿ ಹಿಡಿದು ಕಳೆದ ಮೇ 10ರಂದು ತೀರ್ಪು ನೀಡಿದ್ದ ನ್ಯಾಯಮೂರ್ತಿಗಳಾದ ಯು.ಯು. ಲಲಿತ್ ಹಾಗೂ ಡಿ.ವೈ. ಚಂದ್ರಚೂಡ್ ನೇತೃತ್ವದ ಪೀಠ ಸೋಮವಾರ ಈ ಅರ್ಜಿಯ ವಿಚಾರಣೆ ನಡೆಸಿ ತೀರ್ಪು ಕಾಯ್ದಿರಿಸಿತು.

ಖಾಲಿ ಹುದ್ದೆ ಆಧರಿಸಿ ಬಡ್ತಿ ನೀಡುವಾಗ ಮೀಸಲಾತಿ ನೀತಿ ಅನುಸರಿಸಲಾಗುತ್ತದೆ. ಹಾಗಾಗಿ ಹುದ್ದೆ ಆಧರಿಸಿ ಬಡ್ತಿ ನೀಡುವಾಗ ಮೀಸಲಾತಿ ಅನುಸರಿಸಬಾರದು ಎಂದು 'ಅಹಿಂಸಾ' ಪರ ವಕೀಲ ರಾಜೀವ್ ಧವನ್ ನ್ಯಾಯಪೀಠಕ್ಕೆ ವಿವರಿಸಿದರು.

ಬಡ್ತಿಯಲ್ಲಿ ಮೀಸಲಾತಿ ಅನುಸರಿಸುವ ಕಾಯ್ದೆ ರದ್ದುಪಡಿಸಿ ತೀರ್ಪು ನೀಡಿದ ಬಳಿಕ ರಾಜ್ಯ ಸರ್ಕಾರ ಹೊಸ ಕಾಯ್ದೆ ಜಾರಿಗೊಳಿಸಿದೆ. ಅದನ್ನೂ ಪ್ರಶ್ನಿಸಿರುವ ಅರ್ಜಿಯ ವಿಚಾರಣೆ ನಡೆಸಿ ಇತ್ಯರ್ಥಪಡಿಸಲಾಗಿದೆ. ಆ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೆ ಸಲ್ಲಿಸಲಾದ ಈ ಅರ್ಜಿಯನ್ನು ವಿಚಾರಣೆಗೆ ಪರಿಗಣಿಸಬಾರದು ಎಂದು ಎಸ್.ಸಿ, ಎಸ್.ಟಿ. ನೌಕರರ ಪರ ವಕೀಲರಾದ ಇಂದಿರಾ ಜೈಸಿಂಗ್ ಆಗ್ರಹಿಸಿದರು.

ಅರ್ಜಿದಾರರ ಪರ ಹಿರಿಯ ವಕೀಲ ಶೇಖರ್ ನಾಫಡೆ, ಸರ್ಕಾರದ ಪರ ಬಸವಪ್ರಭು ಪಾಟೀಲ, ಎಸ್‌ಸಿ, ಎಸ್‌ಟಿ ನೌಕರರ ಪರ ದಿನೇಶ್ ದ್ವಿವೇದಿ ವಾದ ಮಂಡಿಸಿದರು.

ಅರ್ಜಿದಾರರು ಮೇ 10ರ ತೀರ್ಪಿನ ಮರು ಪರಿಶೀಲನೆ ಕೋರಿ ಮೇಲ್ಮನವಿ ಸಲ್ಲಿಸಿದ್ದರಾದರೂ, ಕೆಲವು ದಿನಗಳ ಕಾಲ ವಿಚಾರಣೆ ಮುಂದೂಡುವಂತೆ ನ್ಯಾಯಪೀಠಕ್ಕೆ ಮನವಿ ಸಲ್ಲಿಸಿದ್ದರು.